**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕು ಯಗಟಿ ಹೋಬಳಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಮಂಜೂರಾತಿ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಐಸಿಡಬ್ಲ್ಯೂ 335 ಬಿಎಂಎಸ್ 2012, ದಿನಾಂಕ:21-11-2012.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಏಕ ಕಡತ ಸಂಖ್ಯೆ: ಕವಶಿಸಸ/ಹೊಶಾಮಂ/ಸಿಆರ್-41/2017-18, ದಿನಾಂಕ:29-06-2017.

****

JD(E)

__ಪ್ರಸ್ತಾವನೆ:-__

ಉತ್ತರ ಕರ್ನಾಟಕದ ಜಿಲ್ಲೆಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಅನುಕೂಲಕ್ಕಾಗಿ 12 ಕಿತ್ತೂರು ರಾಣಿ ಚೆನ್ನಮ್ಮ ಬಾಲಕಿಯರ ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮೇಕಳ ಗ್ರಾಮ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ, ಈ ಶಾಲೆಯು ಸೇರಿದಂತೆ 15 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ 08 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳನ್ನು 2013-14 ನೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಮಂಜೂರಾತಿ ನೀಡಿ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ:21-11-2012 ರಲ್ಲಿ ಆದೇಶಿಸಿದೆ.

2012-13 ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ:ಐಸಿಡಬ್ಲ್ಯೂ 335 ಬಿಎಂಎಸ್ 2012, ದಿನಾಂಕ:21-11-2012 ರ ಆದೇಶದಲ್ಲಿ ಮಂಜೂರು ಮಾಡಿದ **"ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಯಗಟಿ ಹೋಬಳಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು"** ಎಂಬುವುದರ ಬದಲಾಗಿ **"ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಯಗಟಿ ಹೋಬಳಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು"** ಎಂದು ಮಾರ್ಪಾಡು ಮಾಡಿ ಆದೇಶ ಹೊರಡಿಸುವಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ದಿನಾಂಕ:29-06-2017 ರ ಏಕ ಕಡತದಲ್ಲಿ ಕೋರಿರುತ್ತಾರೆ.

ಮೇಲಿನ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

__**ಸರ್ಕಾರಿ ಆದೇಶ ಸಂಖ್ಯೆ: ಸಕಇ 494 ಮೊದೇಶಾ 2017, ಬೆಂಗಳೂರು ದಿನಾಂಕ:27-10-2017**__

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, 2012-13 ನೇ ಸಾಲಿನಲ್ಲಿ ಮಂಜೂರಾದ ವಸತಿ ಶಾಲೆಗಳ ಪೈಕಿ ಪ್ರಾರಂಭವಾಗದಿರುವ **"ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಯಗಟಿ ಹೋಬಳಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು"** ಎಂಬುವುದರ ಬದಲಾಗಿ **"ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಯಗಟಿ ಹೋಬಳಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು"** ಎಂದು ಮಾರ್ಪಾಡು ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

LNS-2154
7/11/17

(ಪಿ.ಎನ್.ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ),
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:-
1. ಮಹಾಲೇಖಪಾಲರು (ಎ&ಇ ಲೆಕ್ಕ ಪರಿಶೋಧನೆ-1, 2) ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು

೬



3. ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ.
4. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಜಿಲ್ಲೆ.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಉಪ/ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಚಿಕ್ಕಮಗಳೂರು ಜಿಲ್ಲೆ.
9. ಸರ್ಕಾರದ ಉಪ ಕಾರ್ಯದರ್ಶಿ-1 ಇವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

****